# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)
## ವಾರ್ಡ್ ಸಮಿತಿ ಸಭೆ, ದಿನಾಂಕ:11-03-2022 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/28/21-22

ದಿನಾಂಕ: 11-03-2022 ರಂದು ಮಧ್ಯಾಹ್ನ 12.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri. Madhu | Junior Health Inspector |
| 4. | Sri Nagaraj | Tax Inspector |
| 5. | Sri Venkatesh | Horticulture Inspector |
| 6. | Sri Ragavendra | PSI D J Halli Police Station |
| 7. | Sri. Mallesh | BESCOM |
| 8. | Sri.Mahesh Kumar. M | Sanitary Dhafedhar |
| 9. | Sri Suresh | Ward Committee Member |
| 10. | Sri Syed Ansar Pasha | Ward Committee Member |
| 11. | Sri.Nataraj | Ward Committee Member |
| 12. | Sri Mani Maran | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 23-02-2022 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ದೊಡ್ಡಣ್ಣನಗರದ ಮುಖ್ಯರಸ್ತೆಯ ಬದಿಯ ಪಾದಚಾರಿ ಮಾರ್ಗಗಳ ಮೇಲೆ ಫರ್ನಿಚರ್ಸ್‌ಗಳನ್ನು ಇಟ್ಟುಕೊಂಡು ವ್ಯಾಪಾರ ಮಾಡುತ್ತಿರುವುದ್ದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆಂದು ಸಭೆಯಲ್ಲಿ ತಿಳಿಸಲಾಗಿರುತ್ತದೆ. ಅದರಂತೆ ಸಂಬಂಧಪಟ್ಟ ಸಹಾಯಕ ಅಭಿಯಂತರರಿಗೆ ಪಾದಚಾರಿ ಮಾರ್ಗಗಳ ಮೇಲೆ ಫರ್ನಿಚರ್ಸ್‌ಗಳನ್ನು ಇಟ್ಟುಕೊಂಡು ವ್ಯಾಪಾರ ಮಾಡುತ್ತಿರುವುದನ್ನು ತೆರವುಗೊಳಿಸುವ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.

2. ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಬದಿಯಲ್ಲಿ ಬಿದ್ದಿರುವ ಡೇಬ್ರಿಸ್‌ನ್ನು ತೆರವುಗೊಳಿಸುವ ಬಗ್ಗೆ ಸಂಬಂಧಪಟ್ಟ ಸಹಾಯಕ ಅಭಿಯಂತರರಿಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.

3. ಮೋದಿ ಗಾರ್ಡನ್ ಮತ್ತು ಮುರುಗನ್ ದೇವಸ್ಥಾನದ ಹತ್ತಿರ ಸ್ಟ್ರೀಟ್ ಲೈಟ್ (LED) ಅಳವಡಿಸುವ ಬಗ್ಗೆ ಚರ್ಚಿಸಲಾಗಿರುತ್ತದೆ. ಅದರಂತೆ ವಿದ್ಯುತ್ ಇಲಾಖೆಯ ಸಹಾಯಕ ಅಭಿಯಂತರರಾದ ಶ್ರೀ.ಸಂದೀಪ್ ರವರಿಗೆ ದೂರವಾಣಿ ಮುಖಾಂತರ ಸ್ಟ್ರೀಟ್ ಲೈಟ್ (LED) ಅಳವಡಿಸುವ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಲಾಗಿರುತ್ತದೆ.

Scanned with CamScanner

4. ದೊಡ್ಡಣ್ಣನಗರದ ಸೇವಂತ್ ಚರ್ಚ್ ರಸ್ತೆಯಲ್ಲಿ ವಾಟರ್ ಪೈಪ್‌ಲೈನ್‌ಗಳನ್ನು ಅಳವಡಿಸಿಕೊಡಲು ಶ್ರೀ.ನಟರಾಜ್ ರವರು ತಿಳಿಸಿರುತ್ತಾರೆ. ಅದರಂತೆ BWSSB ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಮತ್ತು ಶ್ರೀ.ರಾಹುಲ್ ಸಹಾಯಕ ಅಭಿಯಂತರರು ರವರಿಗೆ ಕ್ರಮಕೈಗೊಳ್ಳಲು ಸೂಚಿಸಲಾಯಿತು.

5. ಎನ್.ಪಿ.ಪ್ಯಾಕ್ಟರಿ ರಸ್ತೆಯ ಖಾಲಿ ಮೈದಾನದಲ್ಲಿ ಘನತ್ಯಾಜ್ಯವನ್ನು ವಿಂಗಡಣೆ ಮಾಡಲು ಘನತ್ಯಾಜ್ಯ ನಿರ್ವಹಣೆ ಕೋಶ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಮತ್ತು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲಾಗಿರುತ್ತದೆ.

6. ಸುಜ್ಞನ ನಗರ ಸ್ಲಂ ಪ್ರದೇಶಲ್ಲಿರುವ ದೊಡ್ಡ ಮೋರಿಯಲ್ಲಿ ಹೂಳು ತೆಗೆಯುವ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಚರ್ಚಿಸಲಾಯಿತು. ಅದರಂತೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಮತ್ತು ಗುತ್ತಿಗೆದಾರರಿಗೆ ತುರ್ತಾಗಿ ಕಾಮಗಾರಿ ಕೈಗೊಳ್ಳಲು ಸೂಚಿಸಲಾಗಿರುತ್ತದೆ.

ಸಹಿ

(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.

17ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.

08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ವಾರ್ಡ್ ವ್ಯಾಪ್ತಿಯ ಎಲ್ಲಾ ವೇಲ್‌ಫೆರ್ ಅಸೋಷಿಯನ್ಸ್ ರವರಿಗೆ.
11. ಕಛೇರಿ ಕಡತಕ್ಕೆ.

Scanned with CamScanner